# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಶಂಕರ್, ಅಂದಿನ ಪ್ರಭಾರಿ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು ಮತ್ತು ಇತರರ ವಿರುದ್ಧ ಜಂಟಿ ಇಲಾಖಾ ವಿಚಾರಣೆ-ವಿಚಾರಣಾಧಿಕಾರಿಗಳನ್ನು ನೇಮಿಸುವ ಬಗ್ಗೆ.

ಓದಲಾಗಿದೆ:

1) ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-ಇವರ ಪತ್ರ ಸಂಖ್ಯೆ:ಮುಇಂ/ಪಂರಾಇಂಇ/ಸಿ-11/ಸ.ಇಂ./ಶಿಸ್ತು-96/2011-12/3933, ದಿನಾಂಕ: 17.08.2011.
2) ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 13 ಇಎನ್‌ಕ್ಯೂ 2011, ದಿನಾಂಕ: 30.09.2011.
3) ಶ್ರೀ ಶಂಕರ್, ಕಾರ್ಯಪಾಲಕ ಇಂಜಿನಿಯರ್, ಇವರ ಲಿಖಿತ ಹೇಳಿಕೆ ದಿನಾಂಕ:13.12.2011, ಶ್ರೀ ಎಂ.ಎನ್.ಪಾಟೀಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಇವರ ಲಿಖಿತ ಹೇಳಿಕೆ ದಿನಾಂಕ:31.12.2011, ಶ್ರೀ ಆಂಜನೇಯ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಇವರ ಲಿಖಿತ ಹೇಳಿಕೆ ದಿನಾಂಕ:28.01.2012, ಶ್ರೀ ಆಬಿದ್ ಅಲಿ, ಕಿರಿಯ ಇಂಜಿನಿಯರ್ ಇವರ ಲಿಖಿತ ಹೇಳಿಕೆ ದಿನಾಂಕ:14.12.2011 ಮತ್ತು ಶ್ರೀ ಶಿವಪ್ಪ, ಕಿರಿಯ ಇಂಜಿನಿಯರ್ ಇವರ ಲಿಖಿತ ಹೇಳಿಕೆ ದಿನಾಂಕ:05.12.2011.

******

ಪ್ರಸ್ತಾವನೆ:

ರಾಯಚೂರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಲ್ಲಿ ನಿಲೋಗಲ್ ಐದನಾಳ ಗ್ರಾಮದ ರಸ್ತೆ ನಿರ್ಮಾಣ ಕಾಮಗಾರಿ ಹಾಗೂ ಪಿಕಪ್ ನಿರ್ಮಾಣ ಕಾಮಗಾರಿಯಲ್ಲಿ ಕ್ರಮವಾಗಿ ರೂ.4.48ಲಕ್ಷ ಮತ್ತು ರೂ.2.50ಲಕ್ಷ ಹಣವನ್ನು ಈ ಕೆಳಕಂಡ ಅಧಿಕಾರಿ/ನೌಕರರು ದುರುಪಯೋಗಪಡಿಸಿಕೊಂಡಿರುವರೆಂದು, ಅವರುಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಕಾರ್ಯದರ್ಶಿ, ಹೈದರಾಬಾದ್-ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ, ಇವರ ಪ್ರಸ್ತಾವವನ್ನು ಪರಿಶೀಲಿಸಿ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು, ಇವರು ಮೇಲೆ ಕ್ರಮಾಂಕ(1)ರಲ್ಲಿ ಓದಲಾದ ದಿನಾಂಕ: 17.08.2001ರ ಪತ್ರದೊಂದಿಗೆ ಶಿಸ್ತು ಕ್ರಮ ಕೈಗೊಳ್ಳಲು ಪ್ರಸ್ತಾವ ಸಲ್ಲಿಸಿರುವುದನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಭಾಗಿಗಳಾದ ಅಧಿಕಾರಿ/ನೌಕರರಿಗೆ ಮೇಲೆ ಕ್ರಮಾಂಕ(2)ರಲ್ಲಿ ಓದಲಾದ ದಿನಾಂಕ: 30.02.2011ರ ಕಾರಣ ಕೇಳುವ ನೋಟೀಸ್ ಜಾರಿ ಮಾಡಲಾಗಿತ್ತು.

1) ಶ್ರೀ ಶಂಕರ್, ಪ್ರಭಾರಿ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
2) ಶ್ರೀ ಎಂ.ಎನ್.ಪಾಟೀಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು.
3) ಶ್ರೀ ಆಂಜನೇಯ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು.
4) ಶ್ರೀ ಕೈಸರ್, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು.

5) ಶ್ರೀ ಶಿವಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು.
6) ಶ್ರೀ ಆಬಿದ ಅಲಿ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು.

ಶ್ರೀ ಕೈಸರ್, ಕಿರಿಯ ಇಂಜಿನಿಯರ್, ಇವರನ್ನು ಹೊರತುಪಡಿಸಿ ಉಳಿದ ಅಧಿಕಾರಿ/ನೌಕರರು ಕಾರಣ ಕೇಳುವ ನೋಟೀಸಿಗೆ ಸಮಜಾಯಿಷಿಯನ್ನು ಸಲ್ಲಿಸಿ, ಆರೋಪಗಳನ್ನು ನಿರಾಕರಿಸಿರುತ್ತಾರೆ. ಅಲ್ಲದೆ ಸದರಿಯವರು ಆರೋಪಪಟ್ಟಿಯಲ್ಲಿ ಆರೋಪಿಸಿರುವಂತೆ ಕರ್ತವ್ಯಲೋಪ ಎಸಗಿಲ್ಲದ ಕಾರಣ ಆರೋಪಗಳಿಂದ ಮುಕ್ತಗೊಳಿಸಲು ಕೋರಿರುತ್ತಾರೆ. ಈ ಪ್ರಕರಣದಲ್ಲಿ ಕಾರ್ಯದರ್ಶಿ, ಕರ್ನಾಟಕ-ಹೈದರಾಬಾದ್ ಪ್ರದೇಶಾಭಿವೃದ್ಧಿ ಮಂಡಳಿ ಮತ್ತು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಇವರುಗಳು ಸಲ್ಲಿಸಿರುವ ದೋಷಾರೋಪ ಪಟ್ಟಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಲಾಗಿ ಆರೋಪಿತ ಅಧಿಕಾರಿಗಳು ಮೇಲೆ ವಿವರಿಸಿರುವಂತೆ ಕರ್ತವ್ಯಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಆದುದರಿಂದ ಈ ನೌಕರರ ವಿರುದ್ಧ ಮಾಡಿರುವ ಆರೋಪಗಳ ಸತ್ಯಾಸತ್ಯತೆಯನ್ನು ಕಂಡುಹಿಡಿಯಲು ಜಂಟಿ ಇಲಾಖಾ ವಿಚಾರಣೆ ಜರುಗಿಸಲು ನಿರ್ಧರಿಸಿ ಸರ್ಕಾರವು ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 13 ಇಎನ್‌ಕ್ಯೂ 2011,**
**ಬೆಂಗಳೂರು, ದಿನಾಂಕ:14.05.2012.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಮತ್ತು ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 13ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧ ಜಂಟಿ ಇಲಾಖಾ ವಿಚಾರಣೆ ನಡೆಸಲು ಶ್ರೀ ಸೋಸಲೆ ಇಂದೂಧರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ, ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ, ರಾಯಚೂರು, ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

1) ಶ್ರೀ ಶಂಕರ್, ಪ್ರಭಾರಿ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
2) ಶ್ರೀ ಎಂ.ಎನ್.ಪಾಟೀಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಮಗ್ ಉಪ ವಿಭಾಗ, ಲಿಂಗಸಗೂರು.
3) ಶ್ರೀ ಆಂಜನೇಯ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ ಲಿಂಗಸಗೂರು .
4) ಶ್ರೀ ಕೈಸರ್, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು.
5) ಶ್ರೀ ಶಿವಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಇಭಾಗ, ಲಿಂಗಸಗೂರು.
6) ಶ್ರೀ ಆಬಿದ ಅಲಿ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು.

ವಿಚಾರಣಾಧಿಕಾರಿಗಳು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 11ರಲ್ಲಿ

ನಿಗದಿಪಡಿಸಿರುವ ಕಾರ್ಯವಿಧಾನದ ಪ್ರಕಾರ ವಿಚಾರಣೆ ಜರುಗಿಸಿ ವರದಿಯನ್ನು ನಾಲ್ಕು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗದಿತ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

14/5/12
(ಎನ್.ವೈ.ಸಾಗರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು(ಲೆಕ್ಕ ಪತ್ರ 1 ಮತ್ತು 2)/(ಆಡಿಟ್)
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ/ಜಲಸಂಪನ್ಮೂಲ ಇಲಾಖೆ/ಸಣ್ಣ ನೀರಾವರಿ ಇಲಾಖೆ.
3) ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು.
4) ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು(ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ರಾಯಚೂರು.
6) ಶ್ರೀ ಸೋಸಲೆ ಇಂದೂಧರ, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ:8, 15ನೇ ಅಡ್ಡರಸ್ತೆ, 5ನೇ ಹಂತ, ಜೆ.ಪಿ.ನಗರ, ಬೆಂಗಳೂರು(ದೂರವಾಣಿ ಸಂಖ್ಯೆ: 26596240, ಮೊಬೈಲ್ ಸಂಖ್ಯೆ:98443 21549)
7) ಸಹಾಯಕ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ, ರಾಯಚೂರು-ಸಂಬಂಧಿಸಿದ ದಾಖಲೆಗಳನ್ನು ವಿಚಾರಣಾಧಿಕಾರಿಗಳಿಗೆ ಮಂಡಿಸಿ ವಿಚಾರಣೆ ಸುಗಮವಾಗಿ ನಡೆಸಲು ಕ್ರಮವಹಿಸಲು ಕೋರಿದೆ.
8) ಶ್ರೀ ಶಂಕರ್, ಅಂದಿನ ಪ್ರಭಾರಿ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು-ಮು.ಕಾ.ನಿ.ಅ. ರವರ ಮುಖಾಂತರ
9) ಶ್ರೀ ಎಂ.ಎನ್.ಪಾಟೀಲ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು-ಮು.ಕಾ.ನಿ.ಅ. ರವರ ಮುಖಾಂತರ
10) ಶ್ರೀ ಆಂಜನೇಯ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು -ಮು.ಕಾ.ನಿ.ಅ. ರವರ ಮುಖಾಂತರ
11) ಶ್ರೀ ಕೈಸರ್, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು -ಮು.ಕಾ.ನಿ.ಅ. ರವರ ಮುಖಾಂತರ
12) ಶ್ರೀ ಶಿವಪ್ಪ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು -ಮು.ಕಾ.ನಿ.ಅ. ರವರ ಮುಖಾಂತರ
13) ಶ್ರೀ ಆಬಿದ್ ಅಲಿ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಲಿಂಗಸಗೂರು -ಮು.ಕಾ.ನಿ.ಅ. ರವರ ಮುಖಾಂತರ

14) ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ(ಸೇವೆಗಳು–ಎ ಮತ್ತು ಸಿ)
15) ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
16) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಉಪ ಕಾರ್ಯದರ್ಶಿ– ಇವರುಗಳ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರಿಗೆ. ಗ್ರಾ.ಅ.ಪಂ.ರಾಜ್ ಇಲಾಖೆ.
17) ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ. – ಇವರಿಗೆ ವೆಬ್ ಸೈಟ್ ನಲ್ಲಿ ಪ್ರಕಟಿಸಲು
18) ರಕ್ಷಾ ಕಡತ/ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.